ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಸಾಲ ಸೌಲಭ್ಯ ಕಲ್ಪಿಸಿಕೊಡುವ ಬಗ್ಗೆ

ಶ್ರೀ ಅರವಿಂದ ಕುಮಾರ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

1010 (1210+1211) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2014ರಿಂದ 2019-2020ನೇ ಸಾಲಿನವರೆಗೆ ಬೀದರ್ ಜಿಲ್ಲೆಯಲ್ಲಿ ಡಾ|| ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹಿರ್ಷಿ ವಾಲ್ಮಿಕಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಯಡಿಯಲ್ಲಿ ಯಾವ ಯಾವ ಸಾಲ ಸೌಲಭ್ಯವನ್ನು ಎಷ್ಟು ಕುಟುಂಬಗಳಿಗೆ ಒದಗಿಸಲಾಗಿದೆ; (ಫಲಾನುಭವಿಗಳವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಡಾ|| ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹಿರ್ಷಿ ವಾಲ್ಮಿಕಿ ಅಭಿವೃದ್ಧಿ ನಿಗಮದಲ್ಲಿ ಒಂದೇ ಕುಟುಂಬದಲ್ಲಿ ಒಬ್ಬರಿಗೆ ಸಾಲ ಸೌಲಭ್ಯವನ್ನು ಕಲ್ಪಿಸಿಕೊಡುವ ನಿಯಮವಿದ್ದರೂ ಒಂದು ಕುಟುಂಬದ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಇ) ಸದರಿ ನಿಯಮಗಳನ್ನು ಉಲ್ಲಂಘಿಸಿ ಒಂದೇ ಕುಟುಂಬದ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಒಂದು ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿದ ಪ್ರಕರಣಗಳೆಷ್ಟು; ಅಂತಹ ಸಾಲ ಸೌಲಭ್ಯಗಳನ್ನು ವಾಪಸ್ಸು ಪಡೆಯಲು ಸರ್ಕಾರ ಯಾವ ಯಾವ ಕ್ರಮಕೈಗೊಳ್ಳುವುದು; (ಮಾಹಿತಿ ನೀಡುವುದು)

(ಉ) ಬೀದರ್ ಜಿಲ್ಲೆಯಲ್ಲಿ 2014-15 ಮತ್ತು 2020-21ನೇ ಸಾಲಿನವರೆಗೆ ಡಾ|| ಬಿ.ಆರ್. ಅಂಬೇಡ್ಕರ್ ಮತ್ತು ಕರ್ನಾಟಕ ಮಹರ್ಷಿ ವಾಲ್ಮಿಕಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಎಷ್ಟು ಕುಟುಂಬಗಳಿಗೆ ಸೌಲಭ್ಯ ಒದಗಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಊ) 2014-15 ಮತ್ತು 2020-21ನೇ ಸಾಲಿನವರೆಗೆ ಡಾ|| ಬಿ.ಆರ್. ಅಂಬೇಡ್ಕರ್ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಒಂದು ಕುಟುಂಬದಲ್ಲಿ ಒಬ್ಬರಿಗೆ ಸಾಲ ಸೌಲಭ್ಯವನ್ನು ಕಲ್ಪಿಸಿಕೊಡುವ ನಿಯಮವಿದ್ದು, ಒಂದು ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಸದಸ್ಯರಿಗೆ ಸಾಲ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?